ಆ) ಹೌದು, ತುಮಕೂರು ನಗರ ಸಭಾ ವ್ಯಾಪ್ತಿಯು ಅಭಿವೃದ್ಧಿ ಹೊಂದುತ್ತಿರುವುದರಿಂದ, ರಸ್ತೆಗಳ ಅಗಲೀಕರಣ ಮತ್ತು ಮೂಲ ಸೌಲಭ್ಯಗಳನ್ನು ಆಧರಿಸಿ, ಮುಂಬರುವ ದಿನಗಳಲ್ಲಿ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದಿಂದ ಪರವಾನಿಗೆ ನೀಡಲು ಕ್ರಮ ವಹಿಸಲಾಗುವುದು.

ಇ) ರಸ್ತೆಗಳ ಅಗಲೀಕರಣ ಮತ್ತು ಮೂಲ ಸೌಲಭ್ಯಗಳ ಲಭ್ಯತೆ ಹಾಗೂ ನಗರದ ಬೆಳವಣಿಗೆ ಪರಿಗಣಿಸಿಕೊಂಡು ಮುಂದಿನ ದಿನಗಳಲ್ಲಿ ಈ ಬಗ್ಗೆ ನಿರ್ಣಯಿಸಲಾಗುವುದು.

ಈ) ಸ್ವಾತಂತ್ರ ಹೋರಾಟಗಾರರು, ಮಾಜಿ ಸೈನಿಕರು ಮತ್ತು ಹಿರಿಯ ನಾಗರೀಕರಿಂದ ಆಟೋರಿಕ್ಷಾ ಪರವಾನಿಗೆ ಕೋರಿ ಯಾವುದೇ ಅರ್ಜಿ ಇದುವರೆಗೂ ಸ್ವೀಕೃತವಾಗಿರುವುದಿಲ್ಲ. ಪರಿಶಿಷ್ಟ ಜಾತಿ/ ಪಂಗಡದವರಿಗೆ ಕಳೆದ ಮೂರು ವರ್ಷಗಳಲ್ಲಿ ನೀಡಲಾದ ಆಟೋರಿಕ್ಷಾ ಪರವಾನಿಗೆಗಳ ವಿವರಗಳು ಈ ಕೆಳಕಂಡಂತಿವೆ.

ಅವಧಿ	ಪರವಾನಿಗೆಗಳ ಸಂಖ್ಯೆ
2004–05	11
2005–06	15
2006–07	16
ಒಟ್ಟು	**42**

1461 (1660) ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಬೆಳ್ಳಾವಿ) :– ಮಾನ್ಯ ಗೃಹ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಧುಗಿರಿ ತಾಲ್ಲೂಕು, ದೊಡ್ಡೇರಿ ಹೋಬಳಿ ಬಡವನಹಳ್ಳಿಯಲ್ಲಿರುವ ಹಾಲಿ ಇರುವ ಔಟ್‌ಪೋಸ್ಟ್ ಅನ್ನು ಮೇಲ್ದರ್ಜೆಗೇರಿಸಲು ಸರ್ಕಾರದ ನಿಲುವೇನು?

ಆ) ಹೌದಾದಲ್ಲಿ, ಈ ಬೇಡಿಕೆ ಈಡೇರಿಸಲು ಸರ್ಕಾರ ಹಾಕಿಕೊಂಡಿರುವ ಕಾಲಮಿತಿ ಏನು?

ಶ್ರೀ ಎಂ.ಪಿ. ಪ್ರಕಾಶ್ (ಗೃಹ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು:

ಅ) ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಔಟ್‌ಪೋಸ್ಟ್‌ಗಳನ್ನು ಮೇಲ್ದರ್ಜೆಗೇರಿಸಲು ಹಲವಾರು ಮಾನದಂಡಗಳಿದ್ದು, ಅದರಂತೆ ಪರಿಗಣಿಸಿ ಕ್ರಮಕೈಗೊಳ್ಳಲಾಗುವುದು.

1462 (1661) ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಬೆಳ್ಳಾವಿ) :– ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆಯ ಬೆಳ್ಳಾವಿ ವಿಧಾನ ಸಭಾ ಕ್ಷೇತ್ರದ ಬೆಳಧರ, ಸಜ್ಜಿಹೊಸಹಳ್ಳಿ ಮತ್ತು ಕವಣದಾಲ ಗ್ರಾಮದಲ್ಲಿ 66/11 ಕೆ.ವಿ. ವಿದ್ಯುತ್ ಉಪ ಸ್ಥಾವರ ಕೇಂದ್ರಗಳನ್ನು ಸ್ಥಾಪನೆ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ;

ಆ) ಹೌದಾದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು;

ಶ್ರೀ ಹೆಚ್.ಡಿ.ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು):

ಅ) ತುಮಕೂರು ಜಿಲ್ಲೆಯ ಬೆಳ್ಳಾವಿ ವಿಧಾನ ಸಭಾ ಕ್ಷೇತ್ರದಲ್ಲಿ ಬರುವ ಗೊಲ್ಲಹಳ್ಳಿ (ಬೆಳಧರ) ಗ್ರಾಮದಲ್ಲಿ 66/11 ಕೆ.ವಿ. ವಿದ್ಯುತ್ ಉಪ ಕೇಂದ್ರಕ್ಕೆ ಮಂಜೂರಾತಿ ದೊರೆತಿದ್ದು, ದಿನಾಂಕ 05–01–2007 ರಂದು ಉಪ ಕೇಂದ್ರದ ಕಾಮಗಾರಿಗಾಗಿ ಟೆಂಡರ್ ಕರೆಯಲಾಗಿದೆ. ದಿನಾಂಕ 14–03–2007 ರಂದು ಸದರಿ ಉಪಕೇಂದ್ರದ ತಾಂತ್ರಿಕ ಬಿಡ್ ತೆರೆಯಲಾಗಿದ್ದು, ಮೌಲ್ಯಮಾಪನದ ಪ್ರಕ್ರಿಯೆ ಪ್ರಗತಿಯಲ್ಲಿದೆ.

ಸಜ್ಜಿಹೊಸಹಳ್ಳಿಯಲ್ಲಿ 66/11 ಕೆ.ವಿ. ವಿದ್ಯುತ್ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆಯನ್ನು ನಿಗಮದ 33 ನೇ ತಾಂತ್ರಿಕ ಸಲಹಾ ಸಮಿತಿಯಲ್ಲಿ ಸಭೆಯಲ್ಲಿ, ಹಾಲಿ ಇರುವ 11 ಕೆ.ವಿ. ವಿದ್ಯುತ್ ಮಾರ್ಗಗಳನ್ನು ಬೇರ್ಪಡಿಸಿ ಉನ್ನತೀಕರಣ ಮಾಡುವುದರಿಂದ ಮತ್ತು ಹೊಸ ಮಾರ್ಗಗಳ ನಿರ್ಮಾಣದ ಹಿನ್ನೆಲೆಯಲ್ಲಿ ವಿದ್ಯುತ್